RNU AIR DHARWAD

**DECEMBER 2,2024**
**ALL INDIA RADIO- DHARWAD**
**PRADESH SAMACHARA (KANNADA) 12PM**

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ, 11 ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಲಾಗುತ್ತಿದೆ. ಸೌರಶಕ್ತಿ, ಪವನಶಕ್ತಿ, ಹಸಿರು ಜಲಜನಕ ಉತ್ಪಾದನಾ ಕ್ಷೇತ್ರದಲ್ಲಿ ರಾಜ್ಯ ಸರ್ಕಾರವು ಖಾಸಗಿ ಕಂಪೆನಿಯ ಜೊತೆ ಒಪ್ಪಂದ ಮಾಡಿಕೊಂಡಿದೆ ಎಂದು ಕೈಗಾರಿಕಾ ಖಾತೆ ಸಚಿವ ಎಂ.ಬಿ ಪಾಟೀಲ ಹೇಳಿದರು. ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಈ ವಿಷಯ ತಿಳಿಸಿರುವ ಅವರು, 2026 ರಲ್ಲಿ ಈ ಯೋಜನೆ ಕಾರ್ಯಗತವಾಗಲಿದ್ದು, ಒಪ್ಪಂದದ ಮೂಲಕ ರಾಜ್ಯದಲ್ಲಿ 3 ಸಾವಿರ ಉದ್ಯೋಗಗಳು ಸೃಷ್ಠಿಯಾಗಲಿವೆ ಎಂದರು.

<><><>

ಹಳೆ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕ ಎಚ್.ಎಸ್.ಆರ್.ಪಿ – ಅಳವಡಿಕೆ ಗಡುವನ್ನು ರಾಜ್ಯ ಸರ್ಕಾರ ವಿಸ್ತರಿಸಿದೆ. ಈ ತಿಂಗಳ 31 ರ ತನಕ ಎಚ್.ಎಸ್.ಆರ್.ಪಿ ಅಳವಡಿಕೆ ಮಾಡಬಹುದು. 2019 ರ ಏಪ್ರಿಲ್ 1 ಕ್ಕೂ ಮೊದಲು ನೋಂದಣಿಯಾಗಿರುವ ಎಲ್ಲ ವಾಹನಗಳಿಗೆ ನಿಯಾಮಾನುಸಾರ ಎಚ್.ಎಸ್.ಆರ್.ಪಿ ಅಳಡಿಸಬೇಕು, ಇಲ್ಲವಾದಲ್ಲಿ ದಂಡ ವಿಧಿಸಲಾಗುವುದು ಎಂದು ಸಾರಿಗೆ ಇಲಾಖೆ ಆಧಿಕಾರಿಗಳು ತಿಳಿಸಿದ್ದಾರೆ. ರಾಜ್ಯದಲ್ಲಿ 2 ಕೋಟಿ ಹಳೆ ವಾಹನಗಳಿದ್ದು, ಈ ವರೆಗೆ 55 ಲಕ್ಷ ವಾಹನಗಳಿಗೆ ಅತಿ ಸುರಕ್ಷಿತ ನೋಂದಣಿ ಫಲಕ ಅಳವಡಿಕೆಯಾಗಿದೆ.

<><><>

ಸಿತಾರ್ ರತ್ನ ರಹಿಮತ್ ಖಾನ್ ಸ್ಮರಣೆ ಅಂಗವಾಗಿ, ಧಾರವಾಡ ನಗರದ ಸೃಜನಾ ರಂಗಮಂದಿರದಲ್ಲಿ ಆಯೋಜಿಸಿದ್ದ ಸಂಗೀತೋತ್ಸವದಲ್ಲಿ ಕಲಾವಿದರು ಸಂಗೀತ ರಸದೌತಣ ನೀಡಿದರು. ಸಿತಾರ್ ರತ್ನ ಸಮಿತಿ ಅಧ್ಯಕ್ಷ ರಾಘವೇಂದ್ರ ಆಯಿ ಅವರು ಸಂಗೀತೋತ್ಸವವನ್ನು ಉದ್ಘಾಟಿಸಿದರು. ಉಸ್ತಾದ್ ಬಾಲೆಖಾನ್ ಮೆಮೊರಿಯಲ್ ಟ್ರಸ್ಟ್, ಭಾರತೀಯ ಸಂಗೀತ ವಿದ್ಯಾಲಯ, ಇಂಡಿಯನ್ ಕೌನ್ಸಿಲ್ ಫಾರ್ ಕಲ್ಚರಲ್ ರಿಲೇಶನ್ಸ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಹಯೋಗದಲ್ಲಿ ಆಯೋಜಿಸಿರುವ ಸಂಗೀತೋತ್ಸವದಲ್ಲಿ ನವದೆಹಲಿಯ ಕಲಾವಿದ ಅಭಯ್ ಸೊಪೊರಿ ಅವರು ಸಂತೂರ್ ವಾದನ

ಪ್ರಸ್ತುತಪಡಿಸಿದರು. ಕಲಾವಿದ ಪಂಡಿತ್ ರಾಜೇಂದ್ರ ನಾಕೋಡ ಅವರು ತಬಲಾ ಸಾಥ್ ನೀಡಿದರು. ಕಲಾವಿದ ಪಂಡಿತ್ ವೆಂಕಟೇಶ ಕುಮಾರ್ ಗಾಯನ ಪ್ರಸ್ತುತಪಡಿಸಿದರು. ಚಿತ್ರ ಕಲಾವಿದೆ ಅರ್ಮಾ ಖಾನ್ ಅವರು ರಚಿಸಿದ 25 ಕಲಾಕೃತಿಗಳನ್ನು ಪ್ರದರ್ಶಿಸಲಾಯಿತು. ಜಲವರ್ಣ, ಸೃಜನಾತ್ಮಕ ಕಲೆಗಳ ಚಿತ್ರ ಪ್ರದರ್ಶನ ಒಂದು ವಾರದ ತನಕ ನಡೆಯಲಿದೆ. ಇಂದು ಸಂಜೆ 5 ಗಂಟೆಗೆ ಹಿಂದುಸ್ತಾನಿ ಗಾಯಕಿ, ಅಶ್ವಿನಿ ಭಿಡೆ ಅವರಿಗೆ ಸಿತಾರ್ ನವಾಜ್ ಉಸ್ತಾದ್ ಬಾಲೆಖಾನ್ ಸ್ಮಾರಕ ಪ್ರಶಸ್ತಿ ಪ್ರದಾನ ನಡೆಯಲಿದೆ.

<><><>

ಹಾವೇರಿ ಜಿಲ್ಲೆ ಶಿಗ್ಗಾಂವಿ ತಾಲೂಕು ಗೊಟಗೋಡಿಯಲ್ಲಿರುವ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ 8 ಹಾಗೂ 9 ನೇ ಘಟಿಕೋತ್ಸವ ಸಮಾರಂಭ ಆರಂಭಗೊಂಡಿದ್ದು, ಪ್ರಗತಿಯಲ್ಲಿದೆ. ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಆರು ಜನರಿಗೆ ಗೌರವ ಡಾಕ್ಟರೇಟ್ ಪ್ರದಾನ ಹಾಗೂ ಒಂಭತ್ತು ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಪ್ರದಾನ ಮಾಡಲಾಗುತ್ತಿದೆ.

<><><>

ವಿಜಯನಗರ ಜಿಲ್ಲೆ, ಯುನೆಸ್ಕೋ ವಿಶ್ವ ಪಾರಂಪರಿಕ ತಾಣ ಹಂಪಿಗೆ ಟರ್ಕಿ ದೇಶದ ರಾಯಭಾರಿ ಒರ್ಹನ್ ಎಲ್ಮನ್ ಓಕನ್ ಭೇಟಿ ನೀಡಿದ್ದು, ವಿಜಯನಗರ ಸಾಮ್ರಾಜ್ಯದ ಗತವೈಭವ ಸಾರುವ ಸ್ಮಾರಕಗಳನ್ನು ವೀಕ್ಷಿಸಿ, ಮೆಚ್ಚುಗೆ ವ್ಯಕ್ತಪಡಿಸಿದರು. ಸಂಗೀತ ಮಂಟಪದಲ್ಲಿ ನೂತನವಾಗಿ ಅಳವಡಿಸಲಾದ ಕ್ಯೂ.ಆರ್ ಕೋಡ್ ಸ್ಕ್ಯಾನ್ ಮಾಡುವ ಮೂಲಕ ಸಂಗೀತ ಆಲಿಸಿ, ಶ್ರೀಮಂತ ಕಲೆ ಸಂಸ್ಕೃತಿಯನ್ನು ಆನಂದಿಸಿದರು. ಎರಡು ದಿನಗಳ ಹಂಪಿ ಭೇಟಿಯಲ್ಲಿರುವ ಅವರು ಇಂದು ವಿರೂಪಾಕ್ಷ ದೇವಸ್ಥಾನ ಸಂದರ್ಶಿಸಲಿದ್ದಾರೆ.

<><><>

ಕನ್ನಡ ಪುಸ್ತಕ ಪರಿಷತ್ ವಿಜಯಪುರದಲ್ಲಿ ಆಯೋಜಿಸಿದ್ದ, ಕನ್ನಡ ಪುಸ್ತಕ ಪರಿಷತ್ತು ಸಮ್ಮೇಳನ – 2024 ರಲ್ಲಿ ರಶ್ಮಿ.ಎಸ್, ರಾಜಕುಮಾರ್ ಬಿ, ಸೋಮಲಿಂಗ ಬೇಡರ ಹಾಗೂ ಗುಂಡಣ್ಣ ಕಲಬುರ್ಗಿ ಅವರಿಗೆ ಡಾಕ್ಟರ್ ತೋಂಟದ ಸಿದ್ದಲಿಂಗ ಶ್ರೀ ಪುಸ್ತಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

<><><>

ಫೆಂಗಲ್ ಚಂಡಮಾರುತದ ಪರಿಣಾಮ ರಾಜ್ಯದ ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ, ಮುಂದಿನ ಮೂರು ದಿನಗಳ ಕಾಲ ಗುಡುಗು, ಸಿಡಿಲು ಸಹಿತ ಸಾಧಾರಣದಿಂದ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಮಳೆಯ ಕಾರಣದಿಂದ ಇಂದು ಕೋಲಾರ, ಚಿಕ್ಕಬಳ್ಳಾಪುರ, ಮೈಸೂರು ಹಾಗೂ ಮಂಡ್ಯ ಜಿಲ್ಲೆಗಳಲ್ಲಿ ಶಾಲೆಗಳಿಗೆ ರಜೆ ಘೋಷಿಸಿರುದಾಗಿ ಆಯಾ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಫೆಂಗಲ್ ಚಂಡಮಾರುತದ ಪರಿಣಾಮ ಜಡಿ ಮಳೆ ಹಾಗೂ ಶೀತ ಗಾಳಿಯ ವಾತಾವರಣವಿದ್ದು, ನಾಗರಿಕರು ಆರೋಗ್ಯ ಕಾಪಾಡಿಕೊಳ್ಳುವತ್ತ ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿ ಡಾಕ್ಟರ್ ಎನ್.ಶಿವಶಂಕರ ಮನವಿ ಮಾಡಿದ್ದಾರೆ

<><><>

ಕಳೆದ ಮೂರು ದಿನಗಳಿಂದ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಶೀತ ವಾತಾವರಣವಿದ್ದು, ಇದರಿಂದ ನ್ಯುಮೊನಿಯಾ ಹಾಗೂ ಇತರೆ ಉಸಿರಾಟದ ಕಾಯಿಲೆಗಳು ಹರಡುವ ಸಾಧ್ಯತೆ ಇರುವುದರಿಂದ, ಸಾರ್ವಜನಿಕರು ಎಚ್ಚರಿಕೆ ವಹಿಸುವಂತೆ, ಜಿಲ್ಲಾ ಆರೋಗ್ಯಾಧಿಕಾರಿ ಡಾಕ್ಟರ್ ಎಸ್.ಎಸ್ ಮಹೇಶ್ ಕುಮಾರ್ ಮನವಿ ಮಾಡಿದ್ದಾರೆ.

<><><>

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದಿಂದ 14 ನೇ ತಾರೀಖಿನಂದು ದಾವಣಗೆರೆ ಜಿಲ್ಲೆಯ ಎಲ್ಲ ನ್ಯಾಯಾಲಯಗಳಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಆಯೋಜಿಸಲಾಗಿದೆ. ಈ ಬಾರಿ 6 ಸಾವಿರಕ್ಕೂ ಅಧಿಕ ಪ್ರಕರಣಗಳ ಇತ್ಯರ್ಥದ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ರಾಜೇಶ್ವರಿ ಹೆಗಡೆ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>